Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 15-09-2022

**ಪತ್ರಿಕಾ ಪ್ರಕಟಣೆ:**

## ವಿಜ್ರಂಭಣೆಯಿಂದ ಜರುಗಿದ ಅಭಿಯಂತರ ದಿನಾಚರಣೆ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯನವರ 165ನೇ ಜನ್ಮದಿನದ ಪ್ರಯುಕ್ತ ಅಭಿಯಂತರ ದಿನಾಚರಣೆ ಕಾರ್ಯಕ್ರಮವನ್ನು ಸಪ್ಟೆಂಬರ್ 15ರಂದು ಹಮ್ಮಿಕೊಳ್ಳಲಾಗಿತ್ತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಧಾರವಾಡದ ಟಾಟಾ ಮೋಟಾರ್ಸ್ ನ ಪ್ರಧಾನ ವ್ಯವಸ್ಥಾಪಕರಾದ ಶ್ರೀ. ಜಗದೀಶ್ ಕುಲಕರ್ಣಿಯವರು ಸರ್ ಎಂ. ವಿಶ್ವೇಶ್ವರಯ್ಯನವರು ಸಮಾಜಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುತ್ತ, ಸಮಾಜದ ಪೂರಕ ಬೆಳವಣಿಗೆಗೆ ಅನುಕೂಲವಾಗುವ ತಂತ್ರಜ್ಞಾನಗಳನ್ನು ಆವಿಷ್ಕರಿಸುವ ಜವಾಬ್ದಾರಿ ಇಂಜಿನಿಯರ್ ಗಳ ಮೇಲಿದೆ ಎಂದು ಹೇಳಿದರು. ನವೀಕರಿಸುವ ಸಂಪನ್ಮೂಲಗಳ ಬಳಕೆಯಿಂದ ಶಕ್ತಿಯ ಬೇಡಿಕೆಯನ್ನು ಪೂರೈಸುವಂತಹ ಮತ್ತು ಪರಿಸರಕ್ಕೆ ಮಾರಕವಾಗದಂತಹ ತಂತ್ರಜ್ಞಾನಗಳನ್ನು ಇನ್ನೂ ಹೆಚ್ಚಾಗಿ ಆವಿಷ್ಕರಿಸುವಂತೆ ಯುವ ಇಂಜಿನಿಯರ್‌ಗಳಿಗೆ ಕರೆ ನೀಡಿದರು. ಭಾರತವು ತಂತ್ರಜ್ಞಾನದಲ್ಲಿ ಸ್ವಾವಲಂಬನೆ ಹೊಂದವಂತೆ ಮಾಡಿ, ದೇಶವು ಇನ್ನಷ್ಟು ಪ್ರಗತಿಯಾಗುವಂತೆ ಮಾಡಬೇಕಿದೆ ಎಂದು ನುಡಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ವಿ.ಎ. ಕುಲಕರ್ಣಿ ಅವರು ಎಲ್ಲಾ ಇಂಜಿನಿಯರ್ ಗಳಿಗೂ ವಿಶ್ವೇಶ್ವರಯ್ಯನವರೇ ಮಾದರಿ, ಅವರು ಅಳವಡಿಸಿಕೊಂಡಿದ್ದ ಮೌಲ್ಯಗಳು, ಕಾರ್ಯನಿಷ್ಠೆ ಇಂದಿಗೂ ಅವಿಸ್ಮರಣೀಯವೆಂದು ಹೇಳಿದರು. ತಂತ್ರಜ್ಞಾನವೊಂದಲ್ಲದೆ ಮಾನವೀಯ ಮೌಲ್ಯಗಳೊಂದಿಗೆ ಉತ್ತಮ ಸಮಾಜವನ್ನು ನಿರ್ಮಿಸುವ ಇಂಜಿನಿಯರ್ ಗಳನ್ನು ರೂಪಿಸುವ ಜವಾಬ್ದಾರಿಯು ತಾಂತ್ರಿಕ ಮಹಾವಿದ್ಯಾಲಯಗಳ ಮೇಲಿದೆ, ಈ ದಿಷೆಯಲ್ಲಿ ನಮ್ಮ ಮಹಾವಿದ್ಯಾಲಯವು ಶ್ರಮಿಸುತ್ತಿದೆ ಎಂದು ನುಡಿದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಅವರು ಸಭಿಕರನ್ನು ಸ್ವಾಗತಿಸುತ್ತ, ಮುಖ್ಯ ಅತಿಥಿಗಳ ಕಿರು ಪರಿಚಯ ಮಾಡಿದರು. ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥರಾದ ಪ್ರೊ. ಸುಧೀರ್ ಕುಲಕರ್ಣಿ ಅವರು ವಂದಿಸಿದರು. ಪ್ರೊ. ಶ್ರೀಗೌರಿ ನಿರೂಪಿಸಿದರು. ಅಭಿಯಂತರ ದಿನಾಚರಣೆಯ ಅಂಗವಾಗಿ ವಿಶ್ವೇಶ್ವರಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಲಾಯಿತು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗ ಮತ್ತು ಭಾರತ ಸರಕಾರದ ಮಾನವ ಸಂಪನ್ಮೂಲ ಇಲಾಖೆಯ ಐ. ಐ. ಸಿ. ಯ ವತಿಯಿಂದ ಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿ ಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

**Principal**
KLS Vishwanathrao Deshpande
Institute of Technology, Haliyal



Freeze
KLS VDIT
Engineer's Day
Chief Guest and Guest Speaker
Shri. JAGADISH KULKARNI,
GENERAL MANAGER (Technical Services),
TATA MOTORS, DHARWAD
In association with
INSTITUTION
INNOVATION
COUNCIL